# ಮೈಸೂರು ವಿಶ್ವವಿದ್ಯಾನಿಲಯ

Estd 1916

(Re-accredited by NAAC with CGPA 3.47 on four point scale with A Grade)

ಸಂಖ್ಯೆ: ಪವಿ/8.6/07/ಅಧಿಸೂಚನೆ/2010-11

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
ದಿನಾಂಕ: **10-03-2022.**

## ಅಧಿಸೂಚನೆ

ವಿಷಯ: ಏಪ್ರಿಲ್/ಮೇ-**2022**ರಲ್ಲಿ ಜರುಗಲಿರುವ **1**ನೇ ಸೆಮಿಸ್ಟರ್‌ನ **(NEP ಪದ್ಧತಿಯ)** ಸ್ನಾತಕ ಪದವಿ (UG) ಪರೀಕ್ಷೆಯ ಬಗ್ಗೆ.

ಉಲ್ಲೇಖ: 1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/13/2021-22, ದಿನಾಂಕ:13-07-2021 (ಪರೀಕ್ಷಾ ಶುಲ್ಕಗಳಿಗೆ ಸಂಬಂಧಿಸಿರುವುದು).

2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ7(ಎ)/456/2016-17, ದಿನಾಂಕ:22-02-2022 (ಶೈಕ್ಷಣಿಕ ವೇಳಾಪಟ್ಟಿಗೆ ಸಂಬಂಧಿಸಿರುವುದು).

******

ಏಪ್ರಿಲ್/ಮೇ-**2022**ರ ಮಾಹೆಯಲ್ಲಿ ನಡೆಯಲಿರುವ **1**ನೇ ಸೆಮಿಸ್ಟರ್‌ನ **(NEP ಪದ್ಧತಿಯ)** ಸ್ನಾತಕ ಪದವಿ (UG) ಪರೀಕ್ಷೆಗಳಾದ ಬಿ.ಎ., ಬಿ.ಎಸ್ಸಿ., ಬಿ.ಎ., (Fine Arts), ಬಿ.ವಿ.ಎ., [Visual Arts(CAVA)], ಬಿ.ಕಾಂ., ಬಿ.ಬಿ.ಎ., ಬಿ.ಎಸ್.ಡಬ್ಲ್ಯೂ., ಬಿ.ಬಿ.ಎ.(T&T)/ಬಿ.ಬಿ.ಎ.(T&H), ಮತ್ತು ಬಿ.ಸಿ.ಎ. ಪರೀಕ್ಷೆಗಳು **ದಿನಾಂಕ:09-04-2022**ರಿಂದ ಪ್ರಾರಂಭವಾಗಲಿದೆ, ಈ ಸಂಬಂಧದ ವಿವರಗಳು ಕೆಳಕಂಡಂತಿರುತ್ತದೆ.

| ಕ್ರ.ಸಂ | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು "uucms.karnataka.gov.in" ಮುಖಾಂತರ ವಿದ್ಯಾರ್ಥಿಗಳ ಪೋರ್ಟಲ್‌ನಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ನಿಮ್ಮ ಕೋರ್ಸಿನ AEC/Languages, SEC ಮತ್ತು Open Elective ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | **18.03.2022** |
| 2 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು ಶುಲ್ಕಸಹಿತ ಪರೀಕ್ಷಾ ಶುಲ್ಕ ಮತ್ತು ಅಂಕಪಟ್ಟಿ ಶುಲ್ಕಗಳೊಂದಿಗೆ ರೂ.100/-ಗಳು(with 1st penalty) | **19.03.2022** |
| 3 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು ಶುಲ್ಕಸಹಿತ ಪರೀಕ್ಷಾ ಶುಲ್ಕ ಮತ್ತು ಅಂಕಪಟ್ಟಿ ಶುಲ್ಕಗಳೊಂದಿಗೆ ರೂ.200/-ಗಳು (with 2nd & last penalty) | **21.03.2022** |
| 4 | **I A** (internal assessment)/ $\mathbf{C_1}$ **&** $\mathbf{C_2}$ ಅಂಕಗಳನ್ನು ಆನ್‌ಲೈನ್ ಮೂಲಕ ನಮೂದಿಸಲು ಕೊನೆಯ ದಿನಾಂಕ | **21.03.2022** |
| 5 | ಕಾಲೇಜಿನವರು ಪ್ರವೇಶ ಪತ್ರಗಳನ್ನು ಮುದ್ರಿಸಿಕೊಳ್ಳುವ ದಿನಾಂಕ | **22.03.2022** ರಿಂದ **24.03.2022** |
| 6 | ಪ್ರಾಯೋಗಿಕ ಪರೀಕ್ಷೆಗಳನ್ನು ಪ್ರಾರಂಭಿಸಿ ಹಾಗೂ ಪೂರ್ಣಗೊಳಿಸುವ ದಿನಾಂಕ | **25.03.2022** ಮತ್ತು **08.04.2022** |

| | | |
|---|---|---|
| 7 | ಕಾಲೇಜಿನವರು ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕಗಳ ಮಾಹಿತಿಯನ್ನು ಕ್ರೂಡಿಕರಿಸಿ ಈ ಕಛೇರಿಗೆ ಸಲ್ಲಿಸುವ ದಿನಾಂಕ | 28.03.2022 |
| 8 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 09.04.2022 |

**ಸೂಚನೆಗಳು:**

1. **1ನೇ** ಸೆಮಿಸ್ಟರ್‌ನ **(NEP ಪದ್ಧತಿಯ)** ಪರೀಕ್ಷಾ ಕಾರ್ಯಗಳು UUCMS ಮುಖಾಂತರ ಕಾಲೇಜಿನ ವತಿಯಿಂದ "academic moduleನಲ್ಲಿ curriculam mapping" ಮಾಡಿದ ನಂತರ, ವಿದ್ಯಾರ್ಥಿಗಳು ಆನ್‌ಲೈನ್ (UUCMS) ಮೂಲಕ ಪತ್ರಿಕೆಗಳನ್ನು ಆಯ್ಕೆ ಮಾಡಿಕೊಂಡು "mapping" ಮಾಡಕೊಳ್ಳಲು ಕಾಲೇಜಿನವರು QP Code/Course Code ಗಳನ್ನು ನೀಡಬೇಕು ಹಾಗೂ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಗದರ್ಶನ ನೀಡಬೇಕು.
2. **ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ: 08.04.2022ರೊಳಗೆ ಪೂರ್ಣಗೊಳಿಸುವುದು. ಸದರಿ ಪರೀಕ್ಷೆಗೆ ಬಾಹ್ಯ ಪರೀಕ್ಷಕರು (External Examiners) ಲಭ್ಯವಾಗದ ಸಂದರ್ಭದಲ್ಲಿ ಆಂತರಿಕ ಪರೀಕ್ಷಕರನ್ನೇ ಬಳಸಿಕೊಂಡು ಪರೀಕ್ಷೆ ನಡೆಸುವುದು (Internal Examiners).**
3. **ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ Online ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.**
4. **ವಿದ್ಯಾಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ (subject selection)ಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ, ಪರೀಕ್ಷಾ ಅರ್ಜಿಗಳಲ್ಲಿ ನ್ಯೂನತೆಗಳಿದ್ದರೆ, ಪ್ರವೇಶ ಪತ್ರಗಳ ಮುದ್ರಣಕ್ಕೆ ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು, ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಮತ್ತೊಮ್ಮೆ ಪರಿಶೀಲಿಸಿಕೊಳ್ಳುವುದು, ಇಲ್ಲದಿದ್ದರೇ ಕಾಲೇಜಿನ ಆಡಳಿತ ವರ್ಗ ಹಾಗೂ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತರೆ.**

**ಪರೀಕ್ಷಾ ಶುಲ್ಕಗಳ ದರಗಳು**

**ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.320/– ಗಳನ್ನು ಪಾವತಿಸುವುದು**

| | | |
|---|---|---|
| **1.** | **B.A./B.A. (Fine Arts),/B.V.A/B.Com:**<br>a) I Semester whole Examination (per semester) | **Rs.880/-** |
| **2.** | **B.Sc./B.C.A./B.Sc. in Family & Community Science:**<br>a) I Semester whole Examination (per semester) | **Rs.990/-** |
| **3.** | **B.B.A./BSW:**<br>a) I Semester Whole Examination (per semester) | **Rs.1,300/-** |
| **4.** | **B.B.A (T&H)/B.B.A(T&T):**<br>I Semester Whole Examination (per semester) | **Rs.2,500/-** |

***Subject to a maximum of whole examination Fee fixed per semester.***

**ವಿಶೇಷ ಸೂಚನೆಗಳು:**

1. **ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.**
2. ಪ್ರತಿಯೊಬ್ಬ ಅಭ್ಯರ್ಥಿಯೂ ಮೊದಲನೇ ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ **ರೂ.320/–**ನ್ನು ಸಹ ಪಾವತಿಸತಕ್ಕದ್ದು.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ: ವಿಘ/1/9/2013–14, ದಿನಾಂಕ 25.09.2013 ಪ್ರಕಾರ 2013–14ನೇ ಶೈಕ್ಷಣಿಕ ಸಾಲಿನಿಂದ ಪದವಿ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.**2.5** ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮತೆಗೆದುಕೊಳ್ಳುವುದು.
4. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ **ರೂ.2.5 ಲಕ್ಷಗಳು ಮೀರಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು ಹಾಗೂ ಪ್ರವರ್ಗ–1 ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಹಾಗೂ ಅಂಕಪಟ್ಟಿ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸಬೇಕು.**

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ, ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಡನೆ ಕಾಲೇಜಿಗೆ ನೀಡಬೇಕು.
4. **ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**

**ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:**

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಇರುವುದರಿಂದ, ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಬೇಕು.
2. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರು ಮಾಡಿದ ಕವರುಗಳಲ್ಲಿ ಇಟ್ಟು ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮರು ದಿನವೇ ಕಳುಹಿಸಬೇಕು. ಈ ದಿನಾಂಕ ಮೀರಿ ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.

3. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆಯಾ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

Gnana 10/3/22

**ಕುಲಸಚಿವ (ಪರೀಕ್ಷಾಂಗ)**

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ಮಾನಸಗಂಗೋತ್ರಿ, ಮೈಸೂರು ಮತ್ತು ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ಧಾರ್ಥನಗರ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾಧಿಕಾರಿಗಳ ಕಛೇರಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
5. ಜಿಲ್ಲಾ ಖಜಾನಾಧಿಕಾರಿಗಳು,ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
6. ಆರಕ್ಷಕ ಅಧೀಕ್ಷಕರು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
7. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು
8. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ ಪ್ರತಿ ಕಳುಹಿಸಲಾಗಿದೆ.
9. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ತಮ್ಮ ಬಾನುಲಿ ಹಾಗೂ ಟಿ.ವಿ ವಾಹಿನಿ ಕೇಂದ್ರದಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಭಿತ್ತರಿಸಲು ಏರ್ಪಾಟನ್ನು ಮಾಡಲು ಕೋರಿದೆ.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗ, ಮಾನಸಗಂಗೋತ್ರಿ, ಮೈಸೂರು 570 006.
11. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
15. ಸಂಯೋಜನಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
16. ಪ್ರಾಜೆಕ್ಟ್ ವ್ಯವಸ್ಥಾಪಕರು, ಮೆಟಾ–ಐ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
17. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
18. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
19. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
20. ಕಛೇರಿ ಪ್ರತಿ.